ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	135
ಸದಸ್ಯರ ಹೆಸರು	:	ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	:	16-07-2019
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ	ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್ ಬಿ ಹುದ್ದೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಗ್ರಾಮ ಪಂಚಾಯತಿಗಳ ಕಾರ್ಯಬಾಹುಳ್ಯ ಹೆಚ್ಚಿರುವುದರಿಂದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಯನ್ನು ಗ್ರೂಪ್ "ಬಿ" ದರ್ಜೆಗೇರಿಸಬೇಕೆಂಬ ಬೇಡಿಕೆ ಇರುತ್ತದೆ.
ಆ	ಈ ಪ್ರಸ್ತಾವನೆ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?(ವಿವರ ನೀಡುವುದು)	ಆರ್ಥಿಕ ಇಲಾಖೆಯ ಅಭಿಪ್ರಾಯದ ಮೇರೆಗೆ ಈ ಪ್ರಸ್ತಾವನೆಯನ್ನು 6ನೇ ಕರ್ನಾಟಕ ರಾಜ್ಯ ವೇತನ ಆಯೋಗದ ಮುಂದೆ ಮಂಡಿಸಲಾಗಿತ್ತು. 6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯ 2ನೇ ಸಂಪುಟದಲ್ಲಿ ಆರ್ಥಿಕ ಇಲಾಖೆಗೆ ಸಲ್ಲಿಸಿದ್ದು, ಗ್ರಾಮ ಪಂಚಾಯತಿಗಳ ಮೇಲ್ದರ್ಜೇಗೇರಿಸುವಿಕೆ ವಿಷಯವು ಸರ್ಕಾರದ ಹಂತದಲ್ಲಿ ಅದರ ಕಾರ್ಯನಿರ್ವಹಣೆಯ ಅಗತ್ಯತೆಗಳನ್ನು ಮತ್ತು ಇತರೆ ತತ್ಸಬಂಧ ಅಂಶಗಳನ್ನು ತೀರ್ಮಾನಿಸಬೇಕಾಗುತ್ತದೆ ಎಂದು ತಿಳಿಸಿರುತ್ತದೆ. ರಾಜ್ಯದ ಗ್ರಾಮ ಪಂಚಾಯತ್‌ಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್ ಬಿ ಹುದ್ದೆಯನ್ನಾಗಿ ಮೇಲ್ದರ್ಜೆಗೇರಿಸುವ ಸಾಧಕ ಬಾಧಕಗಳ ಬಗ್ಗೆ ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಗ್ರಾಅಪ 581 ಗ್ರಾಪಂಅ 2019

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.